Akashvani : Bangalore
National Bulletin In Kannada
25.06.2024 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಲೋಕಸಭಾ ಸ್ಪೀಕರ್ ಸ್ಥಾನಕ್ಕೆ ಎನ್‌ಡಿಎ ನಾಯಕ ಓಂ ಬಿರ್ಲಾ, ಐಎನ್‌ಡಿಐಎ ನಾಯಕ ಕೆ.ಸುರೇಶ್ ನಾಮಪತ್ರ ಸಲ್ಲಿಕೆ
- ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್‌ಗೆ ವಿಚಾರಣಾ ನ್ಯಾಯಾಲಯ ನೀಡಿದ್ದ ಜಾಮೀನಿಗೆ ದೆಹಲಿ ಹೈಕೋರ್ಟ್ ತಡೆ
- ಸನಾತನ ಧರ್ಮ ಅವಹೇಳನ ಪ್ರಕರಣ; ಡಿಎಂಕೆ ನಾಯಕ ಉದಯನಿಧಿ ಸ್ಟಾಲಿನ್‌ಗೆ ಷರತ್ತುಬದ್ಧ ಜಾಮೀನು
- ಅಂಡರ್ ೧೭ ಏಷ್ಯನ್ ಕುಸ್ತಿ ಚಾಂಪಿಯನ್‌ಶಿಪ್; ೪ ಚಿನ್ನ ಸೇರಿದಂತೆ ಒಟ್ಟು ೧೧ ಪದಕ ಗೆದ್ದ ಭಾರತ
- ಜಿಂಬಾಬ್ವೆ ವಿರುದ್ಧದ ಟಿ-೨೦ ಸರಣಿಗೆ ಭಾರತ ತಂಡ ಪ್ರಕಟ

<><*<><>*><>

೧೮ನೇ ಲೋಕಸಭೆಯ ಎರಡನೇ ದಿನವಾದ ಇಂದು ಹೊಸದಾಗಿ ಚುನಾಯಿತ ಸಂಸದರು ಸದನದ ಸದಸ್ಯರಾಗಿ ಪ್ರಮಾಣ ವಚನ ಸ್ವೀಕರಿಸಿದರು. ನಿನ್ನೆ ೨೬೬ ಸಂಸದರು ಪ್ರಮಾಣ ವಚನ ಸ್ವೀಕರಿಸಿದ್ದು, ಉಳಿದ ಸಂಸದರು ಇಂದು ಪ್ರಮಾಣ ವಚನ ಸ್ವೀಕರಿಸಿದರು. ಎನ್‌ಡಿಎ ಮೈತ್ರಿಕೂಟವು ಬಿಜೆಪಿಯ ಹಿರಿಯ ಸಂಸದ ಓಂ ಬಿರ್ಲಾ ಅವರನ್ನು ಸ್ಪೀಕರ್ ಹುದ್ದೆಗೆ ನಾಮನಿರ್ದೇಶನಗೊಳಿಸಿದ್ದು, ಐಎನ್‌ಡಿಐಎ ಮೈತ್ರಿಕೂಟವು ಕಾಂಗ್ರೆಸ್ ಸಂಸದ ಕೆ.ಸುರೇಶ್ ಅವರನ್ನು ಈ ಹುದ್ದೆಗೆ ನಾಮನಿರ್ದೇಶನಗೊಳಿಸಿದೆ. ಉಭಯ ಅಭ್ಯರ್ಥಿಗಳು ಸ್ಪೀಕರ್ ಹುದ್ದೆಗೆ ಇಂದು ನಾಮಪತ್ರ ಸಲ್ಲಿಸಿದ್ದಾರೆ. ಇದಕ್ಕೂ ಮುನ್ನ, ಸ್ಪೀಕರ್ ಹುದ್ದೆಗೆ ಒಮ್ಮತದ ಅಭ್ಯರ್ಥಿಯಾಗಿ ಓಂ ಬಿರ್ಲಾ ಅವರನ್ನು ಪರಿಗಣಿಸುವ ಕುರಿತು ಸರ್ಕಾರ, ವಿರೋಧ ಪಕ್ಷಗಳನ್ನು ಸಂಪರ್ಕಿಸಿತ್ತು. ಕೇಂದ್ರ ಸಚಿವರಾದ ರಾಜನಾಥ್ ಸಿಂಗ್, ಅಮಿತ್ ಶಾ ಮತ್ತು ಪಿಯೂಷ್ ಗೋಯಲ್, ಕಾಂಗ್ರೆಸ್ ಮುಖಂಡ ಕೆ.ಸಿ.ವೇಣುಗೋಪಾಲ್ ಮತ್ತು ಡಿಎಂಕೆಯ ಟಿ.ಆರ್.ಬಾಲು ಅವರೊಂದಿಗೆ ಈ ಕುರಿತು ಸಭೆ ನಡೆಸಿದ್ದರು. ಲೋಕಸಭೆಯ ಸ್ಪೀಕರ್ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಬೇಕು ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಒತ್ತಿ ಹೇಳಿದರು. ಸಂಸತ್ ಭವನದ ಸಂಕೀರ್ಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ವಾತಂತ್ರ್ಯ ನಂತರ ಸ್ಪೀಕರ್ ಹುದ್ದೆಗೆ ಇಲ್ಲಿಯವರೆಗೆ ಯಾವುದೇ ಚುನಾವಣೆ ನಡೆದಿಲ್ಲ. ಅಭ್ಯರ್ಥಿಯ ಬಗ್ಗೆ ಒಮ್ಮತ ಮೂಡಿಸಲು ಸರ್ಕಾರ ವಿರೋಧ ಪಕ್ಷಗಳ ನಾಯಕರೊಂದಿಗೆ ಮಾತನಾಡಿದೆ. ಆದರೆ ಕಾಂಗ್ರೆಸ್ ನೇತೃತ್ವದ ಪ್ರತಿಪಕ್ಷಗಳು, ಷರತ್ತುಗಳನ್ನು ವಿಧಿಸಿ ಉಪಸಭಾಪತಿ ಸ್ಥಾನಕ್ಕೆ ಬೇಡಿಕೆ ಇಟ್ಟವು ಎಂದು ಅವರು ಹೇಳಿದರು. ಒಮ್ಮತವು ಷರತ್ತುಬದ್ಧವಾಗಿರಬಾರದು ಮತ್ತು ಉಪಸಭಾಪತಿ ಆಯ್ಕೆಯ ಬಗ್ಗೆ ಪ್ರತ್ಯೇಕ ನಿರ್ಧಾರಕ್ಕೆ ಸಿದ್ಧ. ಸ್ಪೀಕರ್ ಹುದ್ದೆ ಯಾವುದೇ ಪಕ್ಷಕ್ಕೆ ಸೇರಿಲ್ಲದ ಕಾರಣ, ಈ ಹುದ್ದೆಗೆ ಚುನಾವಣೆ ನಡೆಸಬಾರದು ಎಂದು ಹೇಳಿದ ಸಚಿವ ಕಿರಣ್ ರಿಜಿಜು, ತಮ್ಮ ನಿರ್ಧಾರವನ್ನು ಮರುಪರಿಶೀಲಿಸುವಂತೆ ಪ್ರತಿಪಕ್ಷಗಳಿಗೆ ಮನವಿ ಮಾಡಿದರು.

<><*<><>*><>

ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣಕಾಸು ವರ್ಗಾವಣೆ ಪ್ರಕರಣದಲ್ಲಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ವಿಚಾರಣಾ ನ್ಯಾಯಾಲಯ ನೀಡಿದ್ದ ಜಾಮೀನಿಗೆ ಇಂದು ದೆಹಲಿ ಹೈಕೋರ್ಟ್ ತಡೆ ನೀಡಿದೆ. ಕೇಜ್ರಿವಾಲ್ ಅವರಿಗೆ ಜಾಮೀನು ಮಂಜೂರು ಮಾಡಿದ ವಿಚಾರಣಾ ನ್ಯಾಯಾಲಯದ ಆದೇಶಕ್ಕೆ ತಡೆ ಕೋರಿ ಜಾರಿ ನಿರ್ದೇಶನಾಯ ಸಲ್ಲಿಸಿದ್ದ ಮನವಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸುಧೀರ್ ಕುಮಾರ್ ಜೈನ್ ಅವರನ್ನೊಳಗೊಂಡ ರಜಾಕಾಲದ ಏಕಸದಸ್ಯ ಪೀಠ, ಈ ತೀರ್ಪು ಪ್ರಕಟಿಸಿದೆ. ಇದೇ ವೇಳೆ ಪ್ರಕರಣ ಸಂಬಂಧ ನ್ಯಾಯಾಲಯದ ಮುಂದಿಟ್ಟ ಸಾಕ್ಷ್ಯಗಳು ಮತ್ತು ವಾದಗಳ ಕುರಿತಂತೆ ಇ.ಡಿ. ಯನ್ನು ಪ್ರಶಂಶಿಸಿದ ನ್ಯಾಯಪೀಠ, ಜಾಮೀನು ನೀಡುವ ಸಂದರ್ಭದಲ್ಲಿ ವಿಚಾರಣಾ ನ್ಯಾಯಾಲಯ ಈ ವಿಚಾರವನ್ನು ಪರಿಗಣಿಸಿಲ್ಲ ಎಂದು ಹೇಳಿದೆ. ಜೂನ್ ೨೦ ರಂದು ಕೇಜ್ರಿವಾಲ್ ಅವರಿಗೆ ಜಾಮೀನು ಮಂಜೂರು ಮಾಡಿದ್ದ ವಿಚಾರಣಾ ನ್ಯಾಯಾಲಯ, ೧ ಲಕ್ಷ ವೈಯಕ್ತಿಕ ಬಾಂಡ್ ಪಡೆದು, ಜೈಲಿನಿಂದ ಬಿಡುಗಡೆಗೆ ಸೂಚಿಸಿತ್ತು.

<><*<><>*><>

ಸನಾತನ ಧರ್ಮ ಅವಹೇಳನ ಪ್ರಕರಣಕ್ಕೆ ಸಂಬಂಧಿಸಿದಂತೆ ಡಿಎಂಕೆ ನಾಯಕ ಮತ್ತು ತಮಿಳುನಾಡು ಯುಬಸಬಲೀಕರಣ ಮತ್ತು ಕ್ರೀಡಾಭಿವೃದ್ಧಿ ಸಚಿವ ಉದಯನಿಧಿ ಸ್ಟಾಲಿನ್‌ಗೆ, ಬೆಂಗಳೂರಿನ ವಿಶೇಷ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಷರತ್ತುಬದ್ಧ ಜಾಮೀನು ನೀಡಿದೆ. ಸನಾತನ ಧರ್ಮದ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದ ಸಂಬಂಧ ಉದಯನಿಧಿ ಸ್ಟಾಲಿನ್ ವಿರುದ್ಧ ಸಾಮಾಜಿಕ ಕಾರ್ಯಕರ್ತ ವಿ.ಪರಮೇಶ್ ದೂರು ದಾಖಲಿಸಿದ್ದರು. ದೂರಿನ ಅರ್ಜಿಗೆ ಸಂಬಂಧಿಸಿದಂತೆ ಈ ಹಿಂದೆ ವಿಚಾರಣೆ ನಡೆಸಿದ್ದ ನ್ಯಾಯಾಲಯ, ಕೋರ್ಟ್ ಎದುರು ಹಾಜರಾಗುವಂತೆ ನಿರ್ದೇಶನ ನೀಡಿತ್ತು. ಅದರಂತೆ ಇಂದು ಉದಯನಿಧಿ ಸ್ಟಾಲಿನ್ ಅವರು, ನ್ಯಾಯಾಲಯದ ಎದುರು ಹಾಜರಾಗಿದ್ದರು. ಈ ವೇಳೆ ನ್ಯಾಯಾಲಯ, ೧ ಲಕ್ಷ ರೂಪಾಯಿ ವೈಯಕ್ತಿಕ ಬಾಂಡ್ ಪಡೆದು ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ.

<><*<><>*><>

ಮುಂಬರುವ ಸಾಮಾನ್ಯ ಬಜೆಟ್‌ಗೆ ಸೂಕ್ತ ಸಲಹೆ-ಸೂಚನೆಗಾಗಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನವದೆಹಲಿಯಲ್ಲಿಂದು ವ್ಯಾಪಾರ ಮತ್ತು ಸೇವೆಗಳ ಪ್ರತಿನಿಧಿಗಳೊಂದಿಗೆ ಸಮಾಲೋಚನಾ ಸಭೆ ನಡೆಸಿದರು. ಸಭೆಯಲ್ಲಿ ಕೇಂದ್ರ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ, ಮುಖ್ಯ ಆರ್ಥಿಕ ಸಲಹೆಗಾರ ವಿ.ಅನಂತ ನಾಗೇಶ್ವರನ್, ಹಣಕಾಸು ಕಾರ್ಯದರ್ಶಿ ಟಿ.ವಿ.ಸೋಮನಾಥನ್, ವೆಚ್ಚ ಇಲಾಖೆಯ ಕಾರ್ಯದರ್ಶಿ, ಆರ್ಥಿಕ ವ್ಯವಹಾರಗಳ ಇಲಾಖೆ ಮತ್ತು ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ಕಾರ್ಯದರ್ಶಿಗಳು ಭಾಗವಹಿಸಿದ್ದರು.

<><*<><>*><>

ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಿ ಇಂದಿಗೆ ೫೦ ವರ್ಷ. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವ ಮತ್ತು ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡಾ ಸೇರಿದಂತೆ ಅನೇಕ ಬಿಜೆಪಿ ನಾಯಕರು, ತುರ್ತು ಪರಿಸ್ಥಿತಿ ಹೇರಿದ್ದ ಕಾಂಗ್ರೆಸ್ ಪಕ್ಷದ ವಿರುದ್ಧ ವಾಗ್ದಾಳಿ ನಡೆಸಿದರು. ಪ್ರಧಾನಿ ನರೇಂದ್ರ ಮೋದಿ ಅವರು ೧೯೭೫ರ ತುರ್ತು

ಪರಿಸ್ಥಿತಿಯನ್ನು ವಿರೋಧಿಸಿದ ಎಲ್ಲರಿಗೂ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಸಂವಿಧಾನವನ್ನು ಭಾರತೀಯರು ಅಪಾರವಾಗಿ ಗೌರವಿಸುತ್ತಾರೆ. ಆದರೆ, ಮೂಲಭೂತ ಸ್ವಾತಂತ್ರ್ಯವನ್ನು ಹಾಗೂ ಭಾರತದ ಸಂವಿಧಾನವನ್ನು ಕಾಂಗ್ರೆಸ್ ಪಕ್ಷ ಹೇಗೆ ಕಡೆಗಣಿಸಿದೆ ಎಂಬುದನ್ನು ಈ ದಿನ ನೆನಪಿಸುತ್ತದೆ ಎಂದು ಹೇಳಿದ್ದಾರೆ.

<><*<><>*><>

ಫರಕ್ಕಾದಲ್ಲಿ ಗಂಗಾಜಲ ಹಂಚಿಕೆಯ ಕುರಿತು ೧೯೯೬ರ ಭಾರತ-ಬಾಂಗ್ಲಾದೇಶ ಒಪ್ಪಂದದ ಆಂತರಿಕ ಪರಿಶೀಲನೆಯ ಕುರಿತು ತಮ್ಮೊಂದಿಗೆ ಸಮಾಲೋಚನೆ ನಡೆಸಿಲ್ಲ ಎಂದು ಪಶ್ಚಿಮ ಬಂಗಾಳ ಸರ್ಕಾರ ಹೇಳುತ್ತಿರುವುದು ಸುಳ್ಳು ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ. ೨೦೨೩ರ ಜುಲೈ ೨೪ರಂದು, ಭಾರತ ಸರ್ಕಾರವು, ಫರಕ್ಕಾದಲ್ಲಿ ಗಂಗಾಜಲವನ್ನು ಹಂಚಿಕೊಳ್ಳುವ ಕುರಿತು '೧೯೯೬ರ ಭಾರತ-ಬಾಂಗ್ಲಾದೇಶ ಒಪ್ಪಂದದ ಆಂತರಿಕ ವಿಮರ್ಶೆ ಸಮಿತಿಯು' ಪಶ್ಚಿಮ ಬಂಗಾಳ ಸರ್ಕಾರದ ನಾಮನಿರ್ದೇಶನವನ್ನು ಕೋರಿತು. ೨೦೨೩ರ ಆಗಸ್ಟ್ ೨೫ ರಂದು, ಪಶ್ಚಿಮ ಬಂಗಾಳ ಸರ್ಕಾರವು ಮುಖ್ಯ ಎಂಜಿನಿಯರ್ ಮತ್ತು ಜಲಮಾರ್ಗ ನಿರ್ದೇಶನಾಲಯ, ಪಶ್ಚಿಮ ಬಂಗಾಳ ಸರ್ಕಾರ, ಸಮಿತಿಗೆ ನಾಮನಿರ್ದೇಶನವನ್ನು ರವಾನಿಸಿತು. ೨೦೨೪ರ ಏಪ್ರಿಲ್ ೫ ರಂದು, ಪಶ್ಚಿಮ ಬಂಗಾಳ ಸರ್ಕಾರದ ಜಂಟಿ ಕಾರ್ಯದರ್ಶಿ, ನೀರಾವರಿ ಮತ್ತು ಜಲಮಾರ್ಗ ಇಲಾಖೆಯು ಮುಂದಿನ ೩೦ ವರ್ಷಗಳವರೆಗೆ ಫರಕ್ಕಾದಲ್ಲಿ ಗಂಗಾಜಲ ಹಂಚಿಕೆ ತಮ್ಮ ಒಟ್ಟು ಬೇಡಿಕೆಯನ್ನು ತಿಳಿಸಿತು ಎಂದು ಕೇಂದ್ರ ಸರ್ಕಾರ ತಿಳಿಸಿದೆ.

<><*<><>*><>

ದೆಹಲಿ ಪಾಲಿನ ನೀರು ನೀಡುವಂತೆ ಹರ್ಯಾಣ ಸರ್ಕಾರಕ್ಕೆ ಆಗ್ರಹಿಸಿ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದ ಸಚಿವೆ ಅತಿಶಿ, ಅನಾರೋಗ್ಯದಿಂದ ದೆಹಲಿಯ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ. ಕಳೆದ ಕೆಲ ದಿನಗಳಿಂದ ಅನಿರ್ಧಿಷ್ಟಾವಧಿ ಉಪವಾಸ ನಡೆಸುತ್ತಿದ್ದ ಅವರ ಸಕ್ಕರೆ ಮಟ್ಟ ಕುಸಿತವಾಗಿದ್ದು, ರಕ್ತದೊತ್ತಡ ಕಡಿಮೆಯಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ. ದೇಹದ ಕೀಟೋನ್ ಮಟ್ಟ ಹೆಚ್ಚಾಗಿದ್ದು, ಮುಂಜಾಗ್ರತ ಕ್ರಮವಾಗಿ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ದೆಹಲಿಯ ಪಾಲಿನ ನೀರನ್ನು ಬಿಡುಗಡೆ ಮಾಡುವಂತೆ ಒತ್ತಾಯಿಸಿ ಆಮ್ ಆದ್ಮಿ ಪಕ್ಷದ ಮುಖಂಡರು ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದರು.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಮುಂಬೈ ಷೇರು ಸೂಚ್ಯಂಕ -ಸೆನ್ಸೆಕ್ಸ್ ಮತ್ತು ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ ದಾಖಲೆಯ ಏರಿಕೆ ಕಂಡಿದೆ. ಸೆನ್ಸೆಕ್ಸ್ ೭೧೨ ಅಂಕಗಳ ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೮ ಸಾವಿರದ ೫೪೪ ಅಂಕಗಳು ದಾಖಲಾಗಿದೆ. ಅದೇ ರೀತಿ ನಿಫ್ಟಿ ೧೮೩ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೩ ಸಾವಿರದ ೭೨೧ ಅಂಕಗಳು ದಾಖಲಾಗಿದೆ. ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೩ ರೂಪಾಯಿ ೪೩ ಪೈಸೆಯಷ್ಟಾಗಿದೆ.

<><*<><>*><>

ಜೋರ್ಡಾನ್‌ನ ಅಮ್ಮಾನ್‌ನಲ್ಲಿ ನಡೆದ ಅಂಡರ್-೧೭ ಏಷ್ಯನ್ ಕುಸ್ತಿ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಯುವ ತಂಡ, ನಾಲ್ಕು ಚಿನ್ನ, ಎರಡು ಬೆಳ್ಳಿ ಮತ್ತು ಐದು ಕಂಚಿನ ಪದಕ ಸೇರಿದಂತೆ ಒಟ್ಟು ೧೧ ಪದಕಗಳನ್ನು ತನ್ನದಾಗಿಸಿಕೊಂಡಿತು. ಮಹಿಳೆಯರ ೪೬ ಕೆಜಿ ವಿಭಾಗದಲ್ಲಿ ದೀಪಾಂಶಿ, ೫೩ ಕೆಜಿ ವಿಭಾಗದಲ್ಲಿ ಮುಸ್ಕಾನ್, ೬೧ ಕೆಜಿ ವಿಭಾಗದಲ್ಲಿ ರಜನಿತಾ ಮತ್ತು ೬೯ ಕೆಜಿ ವಿಭಾಗದಲ್ಲಿ ಮಾನ್ಸಿ ಲಾಥರ್ ಅದ್ಭುತ ಪ್ರದರ್ಶನ ನೀಡಿ ನಾಲ್ಕು ಚಿನ್ನದ ಪದಕಗಳನ್ನು ತಮ್ಮದಾಗಿಸಿಕೊಂಡರು. ೪೦ ಕೆಜಿ ವಿಭಾಗದಲ್ಲಿ ರಾಜಾ ಬಾಲಾ ಬೆಳ್ಳಿಗೆ ತೃಪ್ತಿಪಟ್ಟುಕೊಂಡರು. ಪುರುಷರ ವಿಭಾಗದ ೫೫ ಕೆಜಿ ವಿಭಾಗದಲ್ಲಿ ಸಮರ್ಥ ಗಜಾನನ ಮ್ಹಾಕವೆ ಬೆಳ್ಳಿ ಪದಕ ಪಡೆದರೆ, ೬೫ ಕೆಜಿಯಲ್ಲಿ ಆಕಾಶ್, ೭೧ ಕೆಜಿಯಲ್ಲಿ ಸಚಿನ್ ಕುಮಾರ್, ೪೮ ಕೆಜಿಯಲ್ಲಿ ಬಿಕಾಶ್ ಕಚ್ಚಾಪ್, ೬೦ ಕೆಜಿಯಲ್ಲಿ ತುಷಾರ್ ತುಕಾರಾಂ ಪಾಟೀಲ್ ಮತ್ತು ೧೧೦ ಕೆಜಿಯಲ್ಲಿ ರೋನಕ್ ಕಂಚಿನ ಪದಕಗಳನ್ನು ಗೆದ್ದುಕೊಂಡರು.

<><*<><>*><>

ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ, ಜಿಂಬಾಬ್ವೆ ವಿರುದ್ಧದ ಟಿ-೨೦ ಸರಣಿಗೆ ಭಾರತ ತಂಡವನ್ನು ಪ್ರಕಟಿಸಿದ್ದು, ಶುಭಮನ್ ಗಿಲ್‌ಗೆ ತಂಡದ ನಾಯಕನ ಜಬಾಬ್ದಾರಿ ವಹಿಸಲಾಗಿದೆ. ಜುಲೈ ೬ ರಿಂದ ೧೪ ರವರೆಗೆ ಹರಾರೆ ಸ್ಪೋರ್ಟ್ಸ್‌ನಲ್ಲಿ ಜರುಗುವ ಸರಣಿಯಲ್ಲಿ ಒಟ್ಟು ೫ ಪಂದ್ಯಗಳು ನಡೆಯಲಿವೆ. ಅಭಿಷೇಕ್ ಶರ್ಮಾ, ನಿತೀಶ್ ರೆಡ್ಡಿ, ರಿಯಾನ್ ಪರಾಗ್ ಮತ್ತು ತುಷಾರ್ ದೇಶಪಾಂಡೆ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಟಿ-೨೦ ವಿಶ್ವಕಪ್ ತಂಡದಲ್ಲಿದ್ದ ಸಂಜು ಸ್ಯಾಮ್ಸನ್ ಹಾಗೂ ಯಶಸ್ವಿ ಜೈಸ್ವಾಲ್ ಜಿಂಬಾಬ್ವೆ ಪ್ರವಾಸಕ್ಕೂ ಆಯ್ಕೆಯಾಗಿದ್ದಾರೆ. ರೋಹಿತ್ ಶರ್ಮ, ವಿರಾಟ್ ಕೊಹ್ಲಿ, ಹಾರ್ದಿಕ್ ಪಾಂಡ್ಯ, ಸೂರ್ಯಕುಮಾರ್ ಯಾದವ್, ರವೀಂದ್ರ ಜಡೇಜ ಹಾಗೂ ಜಸ್ಪ್ರೀತ್ ಬೂಮ್ರಾ ಅವರಿಗೆ ವಿಶ್ರಾಂತಿ ನೀಡಲಾಗಿದೆ. ಇದೇ ೨೯ ರಂದು ಬಾರ್ಬಡೋಸ್‌ನ ಕೆನ್ಸಿಂಗ್ಟನ್ ಓವಲ್‌ನಲ್ಲಿ ಫೈನಲ್‌ನೊಂದಿಗೆ ಮುಕ್ತಾಯಗೊಳ್ಳುವ ೨೦೨೪ ರ ಪುರುಷರ ಟಿ-೨೦ ವಿಶ್ವಕಪ್ ಟೂರ್ನಿ ಪೂರ್ಣಗೊಂಡ ನಂತರ, ಭಾರತ ತಂಡ, ಜಿಂಬಾಬ್ವೆ ಪ್ರವಾಸ ಕೈಗೊಳ್ಳಲಿದೆ.

<><*<><>*><>

ವೆಸ್ಟ್ ಇಂಡೀಸ್‌ನ ಅರ್ನೋಸ್ ವೇಲ್ ಕ್ರೀಡಾಂಗಣದಲ್ಲಿ ಇಂದು ಬೆಳಗ್ಗೆ ನಡೆದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ೮ರ ಹಂತದ ಕೊನೆಯ ಪಂದ್ಯದಲ್ಲಿ, ಅಫ್ಘಾನಿಸ್ತಾನ ತಂಡ ಬಾಂಗ್ಲಾದೇಶವನ್ನು ಡಿಎಲ್‌ಎಸ್ ನಿಯಮಾನುಸಾರ ೮ ರನ್‌ಗಳಿಂದ ಸೋಲಿಸಿದೆ. ಈ ಗೆಲುವಿನೊಂದಿಗೆ ಅಫ್ಘಾನಿಸ್ತಾನ ನಾಲ್ಕನೇ ತಂಡವಾಗಿ ಸೆಮಿಫೈನಲ್‌ಗೆ ಪ್ರವೇಶಿಸಿದ್ದು, ಆಸ್ಟ್ರೇಲಿಯಾ ಹಾಗೂ ಬಾಂಗ್ಲಾದೇಶ ತಂಡಗಳು ವಿಶ್ವಕಪ್‌ನಿಂದ ಹೊರಬಿದ್ದಿವೆ. ನಾಡಿದ್ದು, ಗುರುವಾರ ಅಮೆರಿಕಾದ ಗಯಾನಾದಲ್ಲಿ ನಡೆಯಲಿರುವ ಸೆಮಿಫೈನಲ್ ಪಂದ್ಯದಲ್ಲಿ ಭಾರತ ಹಾಲಿ ಚಾಂಪಿಯನ್ ಇಂಗ್ಲೆಂಡ್ ತಂಡವನ್ನು ಎದುರಿಸಲಿದೆ.

<><*<><>*><>

ಜರ್ಮನಿಯಲ್ಲಿ ನಡೆಯುತ್ತಿರುವ ಯುರೋಪಿಯನ್ ಫುಟ್‌ಬಾಲ್ ಚಾಂಪಿಯನ್‌ಶಿಪ್‌ನಲ್ಲಿ, ಇಂದು ನಡೆಯಲಿರುವ ಡಿ ಗುಂಪಿನ ಪಂದ್ಯಗಳಲ್ಲಿ ಫ್ರಾನ್ಸ್ ಮತ್ತು ಪೋಲೆಂಡ್ ಸೆಣಸಲಿದ್ದು, ನೆದರ್ಲೆಂಡ್-ಆಸ್ಟ್ರಿಯಾ ಮುಖಾಮುಖಿಯಾಗಲಿವೆ. ಮತ್ತೊಂದು ಪಂದ್ಯದಲ್ಲಿ ಡೆನ್ಮಾರ್ಕ್ ತಂಡ ಸೆರ್ಬಿಯಾ ತಂಡವನ್ನು ಎದುರಿಸಲಿದೆ.

<><*<><>*><>

ಇನ್ನು ಹವಾವರ್ತಮಾನ,

ನೈಋತ್ಯ ಮುಂಗಾರು ಕರ್ನಾಟಕದ ಕರಾವಳಿಯಲ್ಲಿ ಸಾಮಾನ್ಯವಾಗಿತ್ತು. ದಕ್ಷಿಣ ಮತ್ತು ಉತ್ತರ ಒಳನಾಡಿನಲ್ಲಿ ದುರ್ಬಲಗೊಂಡಿತ್ತು. ರಾಜ್ಯದ ಅನೇಕ ಸ್ಥಳಗಳಲ್ಲಿ ಮಳೆಯಾಗಿದೆ. ಕುಂದಾಪುರ ೮, ಆಗುಂಬೆ ೭, ಉಡುಪಿ, ಮಾಣಿ, ಧರ್ಮಸ್ಥಳ ತಲಾ ೬, ಪಣಂಬೂರು, ಸಿದ್ದಾಪುರ, ಕುಮುಟಾ, ಉಪ್ಪಿನಂಗಡಿ, ಕೊಪ್ಪ ತಲಾ ೫, ಕೊಟ್ಟಿಗೆಹಾರ, ಭಾಗಮಂಡಲ, ಕದ್ರಾ, ಮಂಗಳೂರು ವಿಮಾನ ನಿಲ್ದಾಣದಲ್ಲಿ ತಲಾ ೩ ಸೆಂಟಿ ಮೀಟರ್ ಮಳೆಯಾಗಿದೆ. ಮುನ್ಸೂಚನೆಯಂತೆ ಮುಂದಿನ ಒಂದು ವಾರಗಳ ಕಾಲ ರಾಜ್ಯಾದ್ಯಂತ ಸಾಧಾರಣದಿಂದ ಹಗುರ ಮಳೆಯಾಗುವ ಸಾಧ್ಯತೆಯಿದೆ. ಬೆಂಗಳೂರು ಸುತ್ತಮುತ್ತ ಸಾಮಾನ್ಯ ಮೋಡಕವಿದ ವಾತಾವರಣ, ಗರಿಷ್ಠ ೩೦, ಕನಿಷ್ಠ ೨೧ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>